ಪದವಿ ಕಾಲೇಜುಗಳಿಗೆ ಮೂಲಭೂತ ಸೌಲಭ್ಯ

148(345) ಶ್ರೀ ಕ್ಯಾತಸಂದ್ರ ಎನ್. ರಾಜಣ್ಣ (ಮಧುಗಿರಿ) :– ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ತುಮಕೂರು ಜಿಲ್ಲೆ ಮಧುಗಿರಿ ತಾಲ್ಲೂಕಿನ ಮಧುಗಿರಿ ಹಾಗೂ ಬಡುವನಹಳ್ಳಿ ಸರ್ಕಾರಿ ಪದವಿ ಕಾಲೇಜುಗಳು ಮೂಲಭೂತ ಸೌಲಭ್ಯಗಳಿಂದ ವಂಚಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಇ) ಇಲ್ಲದಿದ್ದಲ್ಲಿ ಯಾವ ಕಾಲಮಿತಿಯಲ್ಲಿ ಮೂಲಭೂತ ಸೌಲಭ್ಯಗಳನ್ನು ಒದಗಿಸಲಾಗುವುದು? (ವಿವರ ನೀಡುವುದು)

ಶ್ರೀ ಆರ್.ವಿ. ದೇಶಪಾಂಡೆ (ಮಾನ್ಯ ಉನ್ನತ ಶಿಕ್ಷಣ ಸಚಿವರು):–

(ಅ) ಬಂದಿದೆ

(ಆ) ಮಧುಗಿರಿ ರೂ. 100.00 ಲಕ್ಷ ವೆಚ್ಚದಲ್ಲಿ ಹೆಚ್ಚುವರಿ ಕೊಠಡಿ ಮತ್ತು ರೂ. 10.00 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ. ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರ ಮುಕ್ತಾಯಗೊಳಿಸಲು ಸೂಚಿಸಿದೆ. ಬಡವನಹಳ್ಳಿ : ರೂ. 60.00 ಲಕ್ಷ ವೆಚ್ಚದಲ್ಲಿ ಹೆಚ್ಚುವರಿ ಕೊಠಡಿ ಮತ್ತು ರೂ. 5.00 ಲಕ್ಷ ವೆಚ್ಚದಲ್ಲಿ ಶೌಚಾಲಯ ನಿರ್ಮಾಣಕ್ಕೆ ಮಂಜೂರಾತಿ ನೀಡಲಾಗಿದೆ ಕಟ್ಟಡ ಕಾಮಗಾರಿ ಪ್ರಗತಿಯಲ್ಲಿದ್ದು ಶೀಘ್ರ ಮುಕ್ತಾಯಗೊಳಿಸಲು ಸೂಚಿಸಿದೆ.

(ಇ) ಉದ್ಭವಿಸುವುದಿಲ್ಲ.

ಗೃಹ ಮಂಡಳಿಯು ಖರೀದಿಸಿರುವ ಭೂಮಿ

149(280) ಶ್ರೀ ಮಲ್ಲಿಕಾರ್ಜುನ ಸಿದ್ರಾಮಪ್ಪ ಖೂಬಾ (ಬಸವಕಲ್ಯಾಣ):– ಮಾನ್ಯ ವಸತಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–